## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಶಹಾಪೂರ ಇವರ ವಿರುದ್ಧದ ಲೋಕಾಯುಕ್ತ ಇಲಾಖಾ ವಿಚಾರಣೆ-ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಇಎನ್ ಕ್ಯೂ 2020 ದಿನಾಂಕ: 02.03.2021.
2. ಅಪರ ನಿಬಂಧಕರು, ವಿಚಾರಣೆಗಳು-11 ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ: ಉಪಲೋಕ್-1/ಡಿಇ/40/2021/ ಎಆರ್ಇ-11 ದಿನಾಂಕ: 05.10.2021.
3. ಮಾನ್ಯ ಉಪ ಲೋಕಾಯುಕ್ತ-1 ಇವರ ಶಿಫಾರಸ್ಸು ವರದಿ ಸಂಖ್ಯೆ: ಉಪಲೋಕ್-1/ಡಿಇ/40/2021/ ಎಆರ್ಇ-11 ದಿನಾಂಕ: 07.10.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1) ರಲ್ಲಿ ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರು ತಮ್ಮ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆಂಬಬಗ್ಗೆ ಕಲಬುರಗಿ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ದಾಖಲಾದ ಮೊಕದ್ದಮೆ ಸಂಖ್ಯೆ: 06/2014 ರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಯಾದಗಿರಿ ಲೋಕಾಯುಕ್ತ ಪೊಲೀಸ್ ಠಾಣೆಯ ಉಪಾಧೀಕ್ಷಕ ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಸೆಕ್ಷನ್ – 9 (7) ರಡಿ ತನಿಖೆ ಕೈಗೊಂಡು ಸಲ್ಲಿಸಿದ್ದ ಅಂತಿಮ ತನಿಖಾ ವರದಿ ಹಾಗೂ ಇನ್ನಿತರ ದಾಖಲೆಗಳನ್ನು ಲೋಕಾಯುಕ್ತ ಸಂಸ್ಥೆಯು ಪರಿಶೀಲಿಸಿ ಲೋಕಾಯುಕ್ತ ಕಾಯ್ದೆ ಕಲಂ 12 (3) ರ ಅನುಸಾರ ಸಲ್ಲಿಸಿದ್ದ ವರದಿಯನ್ನು ಸರ್ಕಾರವು ಪರಿಶೀಲಿಸಿ, ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ದಂಡು ಬಂದ ಹಿನ್ನಲೆಯಲ್ಲಿ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಂತೆ ನಡೆಸಲು ಸದರಿ ನಿಯಮಗಳ ನಿಯಮ 14 (ಎ) ರನ್ವಯ ಪ್ರಕರಣವನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಇಎನ್ಕ್ಯೂ 2020 ದಿನಾಂಕ: 02.03.2021 ರಲ್ಲಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿತ್ತು.

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತ ರವರು ಅಪರ ನಿಬಂಧಕರು ವಿಚಾರಣೆಗಳು-11 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು, ವಿಚಾರಣಾಧಿಕಾರಿಯವರು ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಲು ಸದರಿಯವರಿಗೆ

ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡುವ ಮೊದಲೇ ಆಪಾದಿತ ನೌಕರರಾದ ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ,
ಶಹಾಪೂರ ಇವರು ದಿನಾಂಕ: 20.05.2021 ರಂದು ನಿಧನ ಹೊಂದಿರುವುದರಿಂದ ಅವರ ವಿರುದ್ಧದ ಶಿಸ್ತು ನಡವಳಿಯನ್ನು ಸ್ಥಗಿತಗೊಳಿಸಲಾಗಿದೆಯೆಂದು ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಮಾನ್ಯ ಉಪಲೋಕಾಯುಕ್ತ ರವರಿಗೆ ವರದಿ ಸಲ್ಲಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತ ನೌಕರರಾದ ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರು ದಿನಾಂಕ: 20.05.2021 ರಂದು ನಿಧನ ಹೊಂದಿರುವುದರಿಂದ ವಿಚಾರಣಾಧಿಕಾರಿಗಳ ವಿಚಾರಣಾ ವರದಿಯನ್ನು ಒಪ್ಪಿ ಅವರ ವಿರುದ್ಧದ ಶಿಸ್ತು ನಡವಳಿಯನ್ನು ಸ್ಥಗಿತಗೊಳಿಸುವಂತೆ ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು, ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ಆಪಾದಿತ ನೌಕರರಾದ ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಲು ಸದರಿಯವರಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡುವ ಮೊದಲೇ ಸದರಿಯವರು ದಿನಾಂಕ: 20.05.2021 ರಂದು ನಿಧನ ಹೊಂದಿರುವುದರಿಂದ ಅವರ ವಿರುದ್ಧದ ಶಿಸ್ತು ನಡವಳಿಯನ್ನು ಲೋಕಾಯುಕ್ತ ಸಂಸ್ಥೆಯು ಸ್ಥಗಿತಗೊಳಿಸಿರುವುದನ್ನು ಒಪ್ಪಿ ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 110 ಇಎನ್ ಕ್ಯೂ 2021**
**ಬೆಂಗಳೂರು, ದಿನಾಂಕ: 11.01.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಶ್ರೀ ಸುಭಾಷ್ ಚಂದ್ರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಶಹಾಪೂರ ಇವರು ದಿನಾಂಕ: 20.05.2021 ರಂದು ನಿಧನ ಹೊಂದಿರುವುದರಿಂದ ಸದರಿಯವರ ವಿರುದ್ಧದ ಶಿಸ್ತು ನಡವಳಿಯನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ. ನದೀಮ್ 12/1/22

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ) ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ.
7. ಅಪರ ನಿಬಂಧಕರು, ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಮುಖಾಂತರ.
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.